Akashvani : Bangalore
National Bulletin In Kannada
03.09.2024 / 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

- ಬ್ರೂನೈಗೆ ಆಗಮಿಸಿದ ಪ್ರಧಾನಿ ನರೇಂದ್ರ ಮೋದಿಗೆ ಆತ್ಮೀಯ ಸ್ವಾಗತ ಕೋರಿದ ರಾಜಕುಮಾರ ಬಿಲ್ಲಾಹ್
- ದೇಶದ ರಕ್ಷಣಾ ಸನ್ನದ್ಧತೆ ಹೆಚ್ಚಿಸಲು ಒಂದು ಲಕ್ಷ ೪೫ ಸಾವಿರ ಕೋಟಿ ರೂಪಾಯಿಗಳ ಪ್ರಸ್ತಾವನೆಗಳಿಗೆ ಕೇಂದ್ರ ಸರ್ಕಾರ ಅನುಮೋದನೆ
- ಪ್ರಧಾನಮಂತ್ರಿ ಆವಾಸ್ ಯೋಜನೆ ಅಸಂಘಟಿತ ಕಾರ್ಮಿಕರಿಗೆ ವಿಸ್ತರಣೆ
- ಛತ್ತೀಸ್‌ಗಢದ ಬಸ್ತರ್ ವಲಯದಲ್ಲಿ ಭದ್ರತಾ ಪಡೆಗಳಿಂದ ಕಾರ್ಯಾಚರಣೆ: ೯ ನಕ್ಸಲರ ಹತ್ಯೆ
- ಪ್ಯಾರಿಸ್ ಒಲಿಂಪಿಕ್ಸ್: ಮಹಿಳೆಯರ ೫೦ ಮೀಟರ್ ರೈಫಲ್ ವಿಭಾಗದ ಅಂತಿಮ ಸುತ್ತಿನಲ್ಲಿ ಮೋನಾ ಅಗರ್ವಾಲ್, ಅವನಿ ಲೇಖರಾ ಭಾಗಿ

<><*<><>*><>

ಬ್ರೂನೈ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರು ಇಂದು ದರು ಸಲಾಮ್‌ನ ವಿಮಾನ ನಿಲ್ದಾಣಕ್ಕೆ ಬಂದಿಳಿದರು. ಪ್ರಧಾನಿ ಅವರನ್ನು ಅಲ್ಲಿನ ರಾಜಕುಮಾರ ಹಾಜಿ ಅಲ್ ಮುಹ್ತಾದಿ ಬಿಲ್ಲಾಹ್ ಸ್ವಾಗತಿಸಿದರು. ಇದೇ ವೇಳೆ ಪ್ರಧಾನಿ ಅವರನ್ನು ಬ್ರೂನೈನಲ್ಲಿರುವ ಭಾರತೀಯ ಸಮುದಾಯದವರು ಆತ್ಮೀಯ ಸ್ವಾಗತ ಕೋರಿದರು. ದರುಸ್ಸಲಾಮ್‌ಗೆ ಪ್ರಯಾಣ ಬೆಳೆಸುವ ಮುನ್ನ ಪ್ರಧಾನಮಂತ್ರಿ ನರೇಂದ್ರ ಮೋದಿ ಮಾತನಾಡಿ, ಮೊದಲ ಬಾರಿಗೆ ದ್ವಿಪಕ್ಷೀಯ ಪ್ರವಾಸ ಕೈಗೊಳ್ಳಲಾಗಿದೆ. ಭಾರತ ಮತ್ತು ಬ್ರೂನೈ ೪೦ ವರ್ಷಗಳ ರಾಜತಾಂತ್ರಿಕ ಸಂಬಂಧವನ್ನು ಆಚರಿಸುತ್ತಿರುವ ಸಂದರ್ಭದಲ್ಲಿ, ಸುಲ್ತಾನ್ ಹಾಜಿ ಹಸನಲ್ ಬೊಲ್ಕಿಯಾ ಮತ್ತು ರಾಜಮನೆತನದ ಇತರೆ ಸದಸ್ಯರ ಭೇಟಿಗಳನ್ನು ಎದುರು ನೋಡುತ್ತಿದ್ದೇನೆ ಎಂದು ಹೇಳಿದರು. ಬ್ರೂನೈ ನಂತರ ಪ್ರಧಾನಿ ನರೇಂದ್ರ ಮೋದಿ ಅವರು, ಸಿಂಗಾಪುರಕ್ಕೆ ಭೇಟಿ ನೀಡಲಿದ್ದು, ಅಧ್ಯಕ್ಷ ಥರ್ಮನ್ ಷಣ್ಮುಗರತ್ನಂ, ಪ್ರಧಾನಿ ಲಾರೆನ್ಸ್ ವಾಂಗ್, ಹಿರಿಯ ಸಚಿವರಾದ ಲೀ ಸೀನ್ ಲೂಂಗ್ ಮತ್ತು ಗೋ ಚೋಕ್ ಟಾಂಗ್ ಅವರನ್ನು ಭೇಟಿ ಮಾಡುವ ಅವಕಾಶಕ್ಕಾಗಿ ಎದುರು ನೋಡುತ್ತಿದ್ದೇನೆ ಎಂದು ಅವರು ಹೇಳಿದರು. ತಮ್ಮ ಪ್ರವಾಸದ ವೇಳೆ ನರೇಂದ್ರ ಮೋದಿ ಅವರು ಸಿಂಗಾಪುರದ ಉದ್ಯಮಿಗಳನ್ನು ಭೇಟಿಯಾಗಲಿದ್ದಾರೆ. ಸಿಂಗಾಪುರದೊಂದಿಗಿನ ಕಾರ್ಯತಂತ್ರದ ಸಹಭಾಗಿತ್ವವನ್ನು ವಿಶೇಷವಾಗಿ ಸುಧಾರಿತ ಉತ್ಪಾದನೆ, ಡಿಜಿಟಲೀಕರಣ ಮತ್ತು ಸುಸ್ಥಿರ ಅಭಿವೃದ್ಧಿಯ ಹೊಸ ಮತ್ತು ಉದಯೋನ್ಮುಖ ಕ್ಷೇತ್ರಗಳಲ್ಲಿ ಆಳವಾಗಿಸಲು ಚರ್ಚಿಸಲು ಎದುರು ನೋಡುತ್ತಿದ್ದೇನೆ ಎಂದು ಪ್ರಧಾನಿ ಹೇಳಿದ್ದಾರೆ.

<><*<><>*><>

ಭಾರತ ಮತ್ತು ಸಿಂಗಾಪುರ ನಡುವಿನ ದ್ವಿಪಕ್ಷೀಯ ಸಂಬಂಧವನ್ನು ಮುಂದಿನ ಹಂತಕ್ಕೆ ಕೊಂಡೊಯ್ಯುವ ಸಮಯ ಬಂದಿದೆ ಎಂದು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರ ಸಿಂಗಾಪುರ ಭೇಟಿಗೂ ಮುನ್ನ ಸಿಂಗಾಪುರದ ಆಂಗ್ಲ ದೈನಿಕವೊಂದಕ್ಕೆ ನೀಡಿದ ಸಂದರ್ಶನದಲ್ಲಿ ಡಾ.ಜೈಶಂಕರ್, ಕಳೆದ ಎರಡು ದಶಕಗಳಲ್ಲಿ ಉಭಯ ದೇಶಗಳ ನಡುವಿನ ಸಂಬಂಧ ಮತ್ತಷ್ಟು ಬಲಿಷ್ಠಗೊಂಡಿದೆ ಎಂದರು. ಇದೇ ವೇಳೆ, ಅಸ್ಥಿರ ಮತ್ತು ಅನಿಶ್ಚಿತ ಜಗತ್ತಿನಲ್ಲಿ ಉಭಯ ದೇಶಗಳ ನಡುವೆ ನಿಕಟ ಸಹಯೋಗದ ಸಮಸ್ಯೆಯೂ ಇದೆ. ಈ ನಿಟ್ಟಿನಲ್ಲಿ ಎರಡೂ ದೇಶಗಳು ತಮ್ಮದು ಉನ್ನತ ಮಟ್ಟದ ನಂಬಿಕೆ ಮತ್ತು ತಿಳುವಳಿಕೆಯನ್ನು ಆಧರಿಸಿದ ಪಾಲುದಾರಿಕೆ ಎಂಬುದನ್ನು ಗುರುತಿಸಬೇಕು ಎಂದು ಸಚಿವರು ಹೇಳಿದರು.

<><*<><>*><>

ದೇಶದ ರಕ್ಷಣಾ ಸನ್ನದ್ಧತೆಯನ್ನು ಹೆಚ್ಚಿಸಲು ಒಂದು ಲಕ್ಷ ೪೫ ಸಾವಿರ ಕೋಟಿ ರೂಪಾಯಿಗಳ ಪ್ರಸ್ತಾವನೆಗಳಿಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರ ಅಧ್ಯಕ್ಷತೆಯಲ್ಲಿ ರಕ್ಷಣಾ ಸ್ವಾಧೀನ ಮಂಡಳಿ-ಡಿಎಸಿ, ೧೦ ಬಂಡವಾಳ ಸ್ವಾಧೀನ ಪ್ರಸ್ತಾವನೆಗಳನ್ನು ಅನುಮೋದಿಸಿತು. ಭವಿಷ್ಯದ ಸಿದ್ಧ ಯುದ್ಧ ವಾಹನಗಳು, ಏರ್ ಡಿಫೆನ್ಸ್ ಫೈರ್ ಕಂಟ್ರೋಲ್ ರಾಡಾರ್‌ಗಳು, ಡಾರ್ನಿಯರ್-೨೨೮ ವಿಮಾನಗಳು, ಮುಂದಿನ ಪೀಳಿಗೆಯ ವೇಗದ ಗಸ್ತು ಮತ್ತು ಕಡಲಾಚೆಯ ಗಸ್ತು ಹಡಗುಗಳ ಖರೀದಿಗೆ ಡಿಎಸಿ ಒಪ್ಪಿಗೆ ನೀಡಿತು. ಭವಿಷ್ಯದ ಸಿದ್ಧ ಯುದ್ಧ ವಾಹನಗಳು ವಿವಿಧ ಭೂಪ್ರದೇಶಗಳಲ್ಲಿ ಉದ್ಭವಿಸುವ ಬೆದರಿಕೆಗಳನ್ನು ಪರಿಣಾಮಕಾರಿಯಾಗಿ ಎದುರಿಸಲು ಭಾರತೀಯ ಸೇನೆಯ ಟ್ಯಾಂಕ್‌ಗಳನ್ನು ಆಧುನೀಕರಿಸುತ್ತವೆ. ಮುಂದಿನ ೩೫ ರಿಂದ ೪೫ ವರ್ಷಗಳವರೆಗೆ ಕಾರ್ಯಾಚರಣೆಯ ಸಾಮರ್ಥ್ಯಗಳು ಮತ್ತು ಯಾಂತ್ರೀಕರಣದೊಂದಿಗೆ ಸೇವೆಯಲ್ಲಿರುವಂತೆ ಇದನ್ನು ವಿನ್ಯಾಸಗೊಳಿಸಲಾಗಿದೆ. ಏರ್ ಡಿಫೆನ್ಸ್ ಫೈರ್ ಕಂಟ್ರೋಲ್ ರಾಡಾರ್‌ಗಳು ವೈಮಾನಿಕ ಗುರಿಗಳನ್ನು ಪತ್ತೆಹಚ್ಚಲು ಮತ್ತು ಅವುಗಳನ್ನು ಧ್ವಂಸಗೊಳಿಸಲು ಸಹಕಾರಿಯಾಗಿದೆ. ಡಾರ್ನಿಯರ್-೨೨೮ ವಿಮಾನಗಳು, ಮುಂದಿನ ಪೀಳಿಗೆಯ ವೇಗದ ಗಸ್ತು ಹಡಗುಗಳು ಹಾಗೂ ಮುಂದಿನ ಪೀಳಿಗೆಯ ಕಡಲಾಚೆಯ ಗಸ್ತು ನೌಕೆಗಳ ಖರೀದಿಯು, ಕಣ್ಗಾವಲು, ಗಸ್ತು ತಿರುಗುವಿಕೆ, ಶೋಧನೆ, ಪಾರುಗಾಣಿಕಾ ಮತ್ತು ವಿಪತ್ತು ಪರಿಹಾರ ಕಾರ್ಯಾಚರಣೆಗಳನ್ನು ಕೈಗೊಳ್ಳಲು ಭಾರತೀಯ ಕಾವಲು ಪಡೆಯ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

<><*<><>*><>

ಪ್ರಧಾನಮಂತ್ರಿ ಆವಾಸ್ ಯೋಜನೆ- ಪಿಎಂಎವೈ ಪ್ರಯೋಜನಗಳನ್ನು ಅಸಂಘಟಿತ ಕಾರ್ಮಿಕರಿಗೆ ವಿಸ್ತರಿಸುವ ಕ್ರಮವನ್ನು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ ಪ್ರಾರಂಭಿಸಿದೆ. ವಲಸೆ ಕಾರ್ಮಿಕರು, ಕಟ್ಟಡ ಕಾರ್ಮಿಕರು, ಬೀಡಿ ಕಾರ್ಮಿಕರು, ಸಿನಿ ಕಾರ್ಮಿಕರು, ಕಲ್ಲಿದ್ದಲು ಕಾರ್ಮಿಕರು, ಗುತ್ತಿಗೆ ಕಾರ್ಮಿಕರು ಮತ್ತು ಇತರೆ ಅಸಂಘಟಿತ ಕಾರ್ಮಿಕರನ್ನು ಸೇರ್ಪಡೆಗೊಳಿಸುವಂತೆ ಒತ್ತಾಯಿಸಿ, ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯವು ಎಲ್ಲಾ ರಾಜ್ಯ ಸರ್ಕಾರಗಳಿಗೆ ಪತ್ರ ಬರೆದಿದೆ. ಅರ್ಹ ಫಲಾನುಭವಿಗಳಿಗೆ ಎರಡು ಕೋಟಿ ಹೆಚ್ಚುವರಿ ಮನೆಗಳನ್ನು ಒದಗಿಸುವ ಗುರಿಯೊಂದಿಗೆ ಪ್ರಸಕ್ತ ಹಣಕಾಸು ವರ್ಷದಿಂದ ೨೦೨೮-೨೯ ರವರೆಗೆ ಹೆಚ್ಚುವರಿ ಐದು ವರ್ಷಗಳವರೆಗೆ ಪ್ರಧಾನ ಮಂತ್ರಿ ಆವಾಸ್ ಯೋಜನೆಯನ್ನು ವಿಸ್ತರಿಸಲು ಕೇಂದ್ರ ಸಚಿವ ಂಪುಟದ ಅನುಮೋದನೆಯನ್ನು ಪರಿಗಣಿಸಿ, ಈ ನಿರ್ಧಾರವನ್ನು ತೆಗೆದುಕೊಳ್ಳಲಾಗಿದೆ. ಈ ಉಪಕ್ರಮವು ಆರ್ಥಿಕವಾಗಿ ದುರ್ಬಲ ಕಾರ್ಮಿಕರ ವಸತಿ ಅಗತ್ಯಗಳನ್ನು ಪೂರೈಸುತ್ತದೆ.

<><*<><>*><>

ರಸ್ತೆಗಳಲ್ಲಿ ನಾಗರಿಕರ ಸುರಕ್ಷತೆ ಅತ್ಯಂತ ಮುಖ್ಯ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ನವದೆಹಲಿಯಲ್ಲಿಂದು ಟನೆಲಿಂಗ್ ಇಂಡಿಯಾದ ಎರಡನೇ ಆವೃತ್ತಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಮಳೆ, ಭೂಕುಸಿತ ಮತ್ತು ಪ್ರವಾಹದ ಸಂದರ್ಭಗಳಲ್ಲಿ ರಸ್ತೆಗಳಲ್ಲಿ ವೆಚ್ಚ-ಪರಿಣಾಮಕಾರಿ ಶಾಶ್ವತ ಪರಿಹಾರಗಳ ಅಗತ್ಯವನ್ನು ಒತ್ತಿ ಹೇಳಿದರು. ಭಾರತವನ್ನು ಐದು ಟ್ರಿಲಿಯನ್ ಡಾಲರ್ ಆರ್ಥಿಕತೆಯನ್ನಾಗಿ ಮಾಡುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಕಾರ್ಯ ನಿರ್ವಹಿಸುತ್ತಿದೆ ಎಂದು ಸಚಿವ ನಿತಿನ್ ಗಡ್ಕರಿ ಹೇಳಿದರು.

<><*<><>*><>

ಛತ್ತೀಸ್‌ಗಢದ ಬಸ್ತರ್ ವಲಯದ ದಂತೇವಾಡ ಮತ್ತು ಬಿಜಾಪುರ ಜಿಲ್ಲೆಗಳ ಗಡಿ ಭಾಗದಲ್ಲಿಂದು ಭದ್ರತಾ ಪಡೆಗಳು ಮತ್ತು ನಕ್ಸಲರ ನಡುವೆ ನಡೆದ ಗುಂಡಿನ ಚಕಮಕಿಯಲ್ಲಿ ೯ ನಕ್ಸಲರು ಹತರಾಗಿದ್ದಾರೆ. ಬಸ್ತರ್ ವಲಯದಲ್ಲಿ ನಕ್ಸಲ್ ಚಟುವಟಿಕೆ ಕುರಿತು ಖಚಿತ ಮಾಹಿತಿ ಅನ್ವಯ ಕೇಂದ್ರ ಮೀಸಲು ಪೊಲೀಸ್ ಪಡೆ ಮತ್ತು ಜಿಲ್ಲಾ ಮೀಸಲು ಪಡೆಗಳು ನಿನ್ನೆಯಿಂದ ಕಾರ್ಯಾಚರಣೆ ನಡೆಸಿವೆ. ಇಂದು ಬೆಳಗಿನ ಜಾವ ಪುರಂಗೇಲ್ ಮತ್ತು ಆಂದ್ರಿ ಅರಣ್ಯ ಪ್ರದೇಶದ ಲೋಹಾ ಗ್ರಾಮದ ಬಳಿ ಗುಂಡಿನ ಚಕಮಕಿ ನಡೆದಿದೆ.

ಮೃತ ನಕ್ಸಲರು ಪೀಪಲ್ಸ್ ಲಿಬರೇಷನ್ ಗೆರಿಲ್ಲಾ ಆರ್ಮಿ ತಂಡದ ಸಮವಸ್ತ್ರ ಧರಿಸಿದ್ದು, ಸ್ಥಳದಲ್ಲಿ ಒಂದು ಎಸ್‌ಎಲ್‌ಆರ್ ಬಂದೂಕು, ಪಾಯಿಂಟ್ ೩೦೩ ರೈಫಲ್ ಸೇರಿದಂತೆ ಹಲವು ಶಸ್ತ್ರಾಸ್ತ್ರಗಳು ಪತ್ತೆಯಾಗಿವೆ. ಉಳಿದ ನಕ್ಸಲರಿಗಾಗಿ ಶೋಧ ಕಾರ್ಯಾಚರಣೆ ಮುಂದುವರಿದಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

<><*<><>*><>

೨೦೨೪-೨೫ನೇ ಸಾಲಿನಲ್ಲಿ ಭಾರತದ ಜಿಡಿಪಿ ಅಭಿವೃದ್ಧಿ ದರವನ್ನು ವಿಶ್ವ ಬ್ಯಾಂಕ್ ಶೇಕಡ ೭ಕ್ಕೆ ಏರಿಕೆ ಮಾಡಿದೆ. ಈ ಮುನ್ನ ಶೇಕಡ ೬.೬ರಷ್ಟು ಅಂದಾಜು ಮಾಡಲಾಗಿತ್ತು. ಭಾರತದಲ್ಲಿ ಪ್ರಸಕ್ತ ಹಣಕಾಸು ವರ್ಷದ ಮಧ್ಯಮ ಅವಧಿಯಲ್ಲಿ ಖಾಸಗಿ ಗ್ರಾಹಕ ಉಪಭೋಗ ಪ್ರಮಾಣ ಮತ್ತು ಬಂಡವಾಳ ಹೂಡಿಕೆ ಹೆಚ್ಚಾಗಿದ್ದು, ದೇಶದ ಆರ್ಥಿಕ ಅಭಿವೃದ್ಧಿ ದರ ಪ್ರಬಲವಾಗಿ ಮುಂದುವರಿದಿದೆ ಎಂದು ವಿಶ್ವ ಬ್ಯಾಂಕ್ ವಿಶ್ಲೇಷಿಸಿದೆ.

<><*<><>*><>

ಆಂಧ್ರ ಪ್ರದೇಶ ಮತ್ತು ತೆಲಂಗಾಣದಲ್ಲಿ ಭಾರಿ ಮಳೆಯಿಂದಾಗಿ ಪ್ರವಾಹ ಪರಿಸ್ಥಿತಿ ಉಂಟಾಗಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ತೆಲಂಗಾಣದ ಖಮ್ಮಂ, ಕರುಣಾಗಿರಿ ಸೇರಿದಂತೆ ಹಲವೆಡೆ ವಸತಿ ಪ್ರದೇಶಗಳಿಗೆ ನೀರು ನುಗ್ಗಿದ್ದು, ವಾಹನ ಸಂಚಾರ ವ್ಯತ್ಯಯಗೊಂಡಿದೆ. ಆಂಧ್ರ ಪ್ರದೇಶದ ಗುಂಟೂರು, ವಿಜಯವಾಡ, ಪಾಲ್ನಾಡು ಸೇರಿದಂತೆ ಹಲವೆಡೆ ಭಾರಿ ಮಳೆ ಮತ್ತು ಪ್ರವಾಹದಿಂದ ಜನಜೀವನ ಅಸ್ತವ್ಯಸ್ತಗೊಂಡಿದೆ. ಪ್ರವಾಹದಿಂದ ತೆಲಂಗಾಣದಲ್ಲಿ ಈವರೆಗೆ ೧೬ ಮಂದಿ ಹಾಗೂ ಆಂಧ್ರ ಪ್ರದೇಶದಲ್ಲಿ ೧೭ ಮಂದಿ ಮೃತಪಟ್ಟಿರುವುದಾಗಿ ವರದಿಯಾಗಿದೆ. ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆ ಪ್ರಗತಿಯಲ್ಲಿದ್ದು, ತೆಲಂಗಾಣದಲ್ಲಿ ಸುಮಾರು ೧೧೦ ಹಾಗೂ ಆಂಧ್ರದಲ್ಲಿ ೧೬೩ ಪರಿಹಾರ ಶಿಬಿರಗಳನ್ನು ತೆರೆಯಲಾಗಿದೆ. ವಾಯುಪಡೆ, ಎನ್‌ಡಿಆರ್‌ಎಫ್ ಸೇರಿದಂತೆ ವಿವಿಧ ಪಡೆಗಳಿಂದ

ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆ ಮುಂದುವರಿದಿದ್ದು, ಇದಕ್ಕಾಗಿ ವಾಯುಪಡೆಯ ೪ ವಿಮಾನಗಳನ್ನು ನಿಯೋಜಿಸಲಾಗಿದೆ. ವಿಜಯವಾಡದ ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಹೆಲಿಕಾಪ್ಟರ್ ಮೂಲಕ ಆಹಾರ, ಔಷಧ, ಕುಡಿಯುವ ನೀರು ಮುಂತಾದ ಸಾಮಗ್ರಿಗಳನ್ನು ಒದಗಿಸಲಾಗುತ್ತಿದೆ. ಖಮ್ಮಂ ಜಿಲ್ಲೆಗೆ ಭೇಟಿ ನೀಡಿದ್ದ ಮುಖ್ಯಮಂತ್ರಿ ಎ.ರೇವಂತ್ ರೆಡ್ಡಿ ಅವರು ೫ ಜಿಲ್ಲೆಗಳಿಗೆ ೫ ಕೋಟಿ ರೂಪಾಯಿ ಮತ್ತು ಮೃತರ ಕುಟುಂಬಕ್ಕೆ ೫ ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ.

<><*<><>*><>

ಪ್ಯಾರಿಸ್‌ನಲ್ಲಿ ನಡೆಯುತ್ತಿರುವ ಪ್ಯಾರಾಲಿಂಪಿಕ್ ಕ್ರೀಡಾಕೂಟದ ಆರನೇ ದಿನವಾದ ಇಂದು, ಮಹಿಳೆಯರ ೫೦ ಮೀಟರ್ ರೈಫಲ್ ವಿಭಾಗದ ಅಂತಿಮ ಸುತ್ತಿನಲ್ಲಿ ಭಾರತದ ಪ್ಯಾರಾ ಶೂಟರ್‌ಗಳಾದ ಮೋನಾ ಅಗರ್ವಾಲ್ ಮತ್ತು ಅವನಿ ಲೇಖರಾ ಪಾಲ್ಗೊಳ್ಳಲಿದ್ದಾರೆ. ಪ್ಯಾರಾ-ಆರ್ಚರಿಯಲ್ಲಿ, ಆರ್ಚರ್ ಪೂಜಾ ಮಹಿಳೆಯರ ರಿಕರ್ವ್ ಸ್ಪರ್ಧೆಯಲ್ಲಿ ಭಾಗವಹಿಸಲಿದ್ದಾರೆ. ಮಹಿಳೆಯರ ಶಾಟ್‌ಪುಟ್ ಎಫ್-೩೪ ಫೈನಲ್‌ನಲ್ಲಿ ಭಾರತದ ಭಾಗ್ಯಶ್ರೀ ೭.೨೮ ಮೀಟರ್ ಎಸೆತದೊಂದಿಗೆ ಐದನೇ ಸ್ಥಾನ ಪಡೆದರು. ಮಹಿಳೆಯರ ೪೦೦ ಮೀಟರ್ ಟಿ೨೦ ಫೈನಲ್‌ನಲ್ಲಿ ದೀಪ್ತಿ ಜೀನಂಜಿ ಭಾಗವಹಿಸಲಿದ್ದಾರೆ. ಈ ನಡುವೆ, ಪುರುಷರ ಹೈಜಂಪ್ ಟಿ೬೩ ಅಂತಿಮ ಸುತ್ತಿನಲ್ಲಿ ಮರಿಯಪ್ಪನ್ ತಂಗವವೇಲು, ಶರದ್ ಕುಮಾರ್ ಮತ್ತು ಶೈಲೇಶ್ ಕುಮಾರ್ ಪೈಪೋಟಿ ನೀಡಲಿದ್ದಾರೆ. ಪುರುಷರ ಜಾವೆಲಿನ್ ಥ್ರೋ ಎಫ್ ೪೬ ಫೈನಲ್‌ನಲ್ಲಿ ಅಜಿತ್ ಸಿಂಗ್, ರಿಂಕು ಮತ್ತು ಸುಂದರ್ ಸಿಂಗ್ ಸ್ಪರ್ಧಿಸಲಿದ್ದಾರೆ. ಪ್ರಸ್ತುತ ಭಾರತ ಮೂರು ಚಿನ್ನ ಸೇರಿದಂತೆ ೧೫ ಪದಕಗಳೊಂದಿಗೆ ಪದಕ ಪಟ್ಟಿಯಲ್ಲಿ ೧೫ನೇ ಸ್ಥಾನದಲ್ಲಿದೆ.

<><*<><>*><>

೨೦೨೫ರ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್ ಪಂದ್ಯಕ್ಕೆ ದಿನಾಂಕ ನಿಗದಿಯಾಗಿದೆ. ಮುಂದಿನ ವರ್ಷ ಜೂನ್ ೧೧ ರಿಂದ ೧೫ ರವರಗೆ ವಿಶ್ವ ಟೆಸ್ಟ್ ಚಾಂಪಿಯನ್ ಫೈನಲ್ ಪಂದ್ಯ ಜರುಗಲಿದೆ. ಈ ಪಂದ್ಯಕ್ಕೆ ಇಂಗ್ಲೆಂಡ್‌ನ ಲಾರ್ಡ್ಸ್ ಮೈದಾನ ಆತಿಥ್ಯ ವಹಿಸಲಿದೆ. ಇದಕ್ಕೂ ಮುನ್ನ ನಡೆದ ೨೦೨೧ರ ಮತ್ತು ೨೦೨೩ರ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್ ಪಂದ್ಯಗಳಿಗೆ ಇಂಗ್ಲೆಂಡ್‌ನ ಓವಲ್ ಮೈದಾನ ಆತಿಥ್ಯ ವಹಿಸಿತ್ತು. ಈ ಬಾರಿ ಕ್ರಿಕೆಟ್ ಕಾಶಿ ಲಾರ್ಡ್ಸ್ ಮೈದಾನದಲ್ಲಿ ಅಂತಿಮ ಹಣಾಹಣಿಯನ್ನು ಆಯೋಜಿಸಲು ಐಸಿಸಿ ನಿರ್ಧರಿಸಿದೆ. ಫೈನಲ್ ಪಂದ್ಯಕ್ಕೆ ಮಳೆ ಅಡಚಣೆ ಉಂಟು ಮಾಡಿದರೆ ಅಥವಾ ಇನ್ನಿತರ ಕಾರಣಗಳಿಂದ ದಿನದಾಟ ನಡೆಯದಿದ್ದರೆ ಮೀಸಲು ದಿನದಾಟದ ಮೂಲಕ ಪಂದ್ಯವನ್ನು ಪೂರ್ಣಗೊಳಿಸಲಾಗುತ್ತದೆ. ಇದಕ್ಕಾಗಿ ಜೂನ್ ೧೬ ಮೀಸಲು ದಿನವಾಗಿ ಘೋಷಿಸಲಾಗಿದೆ. ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್‌ನ ಫೈನಲ್ ಪಂದ್ಯದಲ್ಲಿ ಮುಖಾಮುಖಿಯಾಗುವ ತಂಡಗಳ ಬಗ್ಗೆ ಇನ್ನೂ ನಿರ್ಧಾರವಾಗಿಲ್ಲ. ಅಂಕ ಪಟ್ಟಿಯಲ್ಲಿ ಟೀಮ್ ಇಂಡಿಯಾ ಅಗ್ರಸ್ಥಾನದಲ್ಲಿದೆ.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೪ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೮೨ ಸಾವಿರದ ೫೫೫ ಅಂಕಗಳು ದಾಖಲಾಗಿದೆ. ಇದೇ ವೇಳೆ, ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೧ ಅಂಕ ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೫ ಸಾವಿರದ ೨೮೦

ಅಂಕಗಳು ದಾಖಲಾಗಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೩ ರೂಪಾಯಿ ೯೬ ಪೈಸೆಯಷ್ಟಾಗಿದೆ.

<><*<><>*><>

ಭಾರತೀಯ ವಾಯುಪಡೆಯ ಸುಕೊಯ್-೩೦ ಎಂಕೆಐ ವಿಮಾನಕ್ಕಾಗಿ ೨೪೦ ಏರೋ-ಎಂಜಿನ್‌ಗಳ ಖರೀದಿಯ ಪ್ರಸ್ತಾವನೆಗೆ ಭದ್ರತಾ ಕುರಿತು ಸಂಪುಟ ಸಮಿತಿಯು ಅನುಮೋದಿಸಿದೆ. ಒಟ್ಟು ೨೬ ಸಾವಿರ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್‌ನಿಂದ ಖರೀದಿಗೆ ಅನುಮೋದನೆಯನ್ನು ನೀಡಲಾಗಿದೆ. ಈ ಏರೋ-ಎಂಜಿನ್‌ಗಳ ವಿತರಣೆಯು ಒಂದು ವರ್ಷದ ನಂತರ ಪ್ರಾರಂಭವಾಗುತ್ತದೆ ಮತ್ತು ಎಂಟು ವರ್ಷಗಳ ಅವಧಿಯಲ್ಲಿ ಪೂರ್ಣಗೊಳ್ಳಲಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಈ ಎಂಜಿನ್‌ಗಳನ್ನು ಎಚ್‌ಎಎಲ್‌ನ ಕೊರಾಪುಟ್ ವಿಭಾಗದಲ್ಲಿ ತಯಾರಿಸಲಾಗುತ್ತಿದೆ.

<><*<><>*><>

ದೇಶಾದ್ಯಂತ ಅಸಂಘಟಿತ ಕಾರ್ಮಿಕರ ಇ-ಶ್ರಮ್ ಪೋರ್ಟಲ್ ನೋಂದಣಿ ಮಾಡಿಸಿಕೊಂಡಿದ್ದು, ಮೂರು ವರ್ಷಗಳಲ್ಲಿ ೩೦ ಕೋಟಿ ಮಂದಿ ನೋಂದಣಿ ಮಾಡಿಕೊಂಡಿದ್ದಾರೆ. ಇ-ಶ್ರಮ್‌ನಲ್ಲಿ ಸಾಮಾಜಿಕ ಭದ್ರತಾ ಯೋಜನೆಗಳ ಏಕೀಕರಣ ಯೋಜನೆ ಮತ್ತು ಅರ್ಹ ಕಾರ್ಮಿಕರಿಗೆ ಯೋಜನೆಗಳ ಪ್ರಯೋಜನ ಸಿಗುತ್ತಿದೆ. ಸರ್ಕಾರಿ ವೆಬ್‌ಸೈಟ್‌ಗಳೊಂದಿಗೆ ಇ-ಶ್ರಮ್ ಪೋರ್ಟಲ್‌ನ ಸಮಗ್ರ ಏಕೀಕರಣಕ್ಕೆ ಕ್ರಮ ಕೈಗೊಳ್ಳಲಾಗಿದ್ದು, ಇದು ಒಟ್ಟಾರೆ ಪ್ರಕ್ರಿಯೆಯನ್ನು ಸುಗಮಗೊಳಿಸುತ್ತದೆ. ೨೦೨೧ರ ಆಗಸ್ಟ್ ೨೬ ರಂದು ಪ್ರಾರಂಭವಾದ ಈ ಉಪಕ್ರಮವು ವಿವಿಧ ಸಚಿವಾಲಯಗಳು ಮತ್ತು ಇಲಾಖೆಗಳು ಅಸಂಘಟಿತ ಕಾರ್ಮಿಕರಿಗೆ ಇ-ಶ್ರಮ್ ಪೋರ್ಟಲ್ ಮೂಲಕ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳ ಪ್ರವೇಶವನ್ನು ಸುಲಭಗೊಳಿಸುವ ಗುರಿಯನ್ನು ಹೊಂದಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**